# ಪ್ರಥಮ ಪಿಯುಸಿ ವಾರ್ಷಿಕ ಪರೀಕ್ಷೆ, ಫೆಬ್ರವರಿ–2020

ಸಮಯ : 3–15 ಗಂಟೆ ವಿಷಯ – ಕನ್ನಡ (01) ಅಂಕಗಳು : 10

## ಅ – ವಿಭಾಗ

I ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಒಂದು ಪೂರ್ಣ ವಾಕ್ಯದಲ್ಲಿ ಉತ್ತರಿಸಿ. 10x1=1

1. ಪಿನಾಕ ಪಾಣಿ ಎಂದರೆ ಯಾರು?
2. ಸೌಮಿತ್ರಿ ಸೀತೆಯನ್ನು ಎಲ್ಲಿಗೆ ಕರೆದುಕೊಂಡು ಹೋದನು?
3. ಮಗು ಯಾವುದರ ಹಾಗೆ ಆಗಬೇಕು?
4. ಜಗಪ್ರಳಯ ಯಾವಾಗ ಸಂಭವಿಸುತ್ತದೆ?
5. ಬಡಮಕ್ಕಳ ಪಾಲಿಗೆ ಚಾಕಲೇಟು ಯಾವುದು?
6. ಜ್ಯೋತಿಷ್ಯದ ಉಗಮವು ಎಲ್ಲಿ ಕಂಡು ಬರುತ್ತದೆ?
7. ಅರಣ್ಯ ಜಂತುಗಳಲ್ಲಿ ಬುದ್ಧಿಶಾಲಿಯಾದ ಪ್ರಾಣಿ ಯಾವುದು?
8. ಪಿಶಾಚಿಗಳು ಮನುಷ್ಯರನ್ನು ಯಾವುದರ ಮೂಲಕ ಪ್ರವೇಶಿಸುತ್ತದೆ?
9. ರಾಜಕುಮಾರಿಗೆ ಬಂದ ರೋಗ ಯಾವುದು?
10. ಕತ್ತಲೆಯ ನಿಜಜನಕನು ಯಾರು?

## ಆ – ವಿಭಾಗ

II ಅ. ಯಾವುದಾದರೂ ನಾಲ್ಕು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿರಿ. 4x2=8

11. ವೃಕ್ಷವನ್ನು ಆದಿಕೇಶವ ಹೇಗೆ ಸಲಹುತ್ತಾನೆ?
12. ಮಾದೇವ ತನ್ನ ಶಿಶುಮಕ್ಕಳಿಗೆ ಏನೇನು ನೀಡಿ ಸಲಹಿದನು?
13. ಚಿತಾಭಸ್ಮವಾದ ತರು ಯಾವುದು? ಮತ್ತು ಎಲ್ಲಿ?
14. ಕತ್ತರಿ ಮತ್ತು ಸೂಜಿಗಳ ಕೆಲಸ ಯಾವುದು?
15. ಭೂಮಿ ಮತ್ತು ಜೀವವನ್ನು ಉಳಿಸುವ ದಾರಿ ಯಾವುದು?

ಆ. ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ. 3x2=6

16. ಗಾಂಧಿ ಎಂಬ ಹುಡುಗನ ಕೊನೆಯ ಆಸೆ ಯಾವುದು?
17. ನೇಪಾಳದ ವೈಮಾನಿಕ ಸಾರಿಗೆ ವ್ಯವಸ್ಥೆ ಹೇಗಿದೆ?
18. ಅಪರಾಜಿತಾ ಬಳ್ಳಿಯ ಗುಣ ಯಾವುದು?
19. ರೈತ ಚಳುವಳಿಗಳು ಎಲ್ಲೆಲ್ಲಿ ನಡೆದವು?

ಇ. ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ. 3x2=6

20. ಪಿಶಾಚಿಗಳು ಯಾವುದರಿಂದ ನಾಣ್ಯ ಹಾಗೂ ಸಿಪಾಯಿಗಳನ್ನು ಮಾಡಿಕೊಡುತ್ತವೆ?
21. ಸೈತಾನನಿಗೆ ಮೊದಲ ಪಂಕ್ತಿಯ ಊಟ ನಿರಾಕರಿಸಿದ್ದು ಯಾಕೆ?
22. ಜೋಳೇಶಂಕರ ಏನೆಂದು ಡಂಗುರ ಸಾರಿಸುತ್ತಾನೆ?
23. ಸಾವ್ಕಾರಣ್ಣನು ತನ್ನ ಸಹೋದರರಿಗೆ ಆಸ್ತಿಯನ್ನು ಹೇಗೆ ಹಂಚಿದನು?

## ಇ – ವಿಭಾಗ

III ಅ. ಯಾವುದಾದರೂ ಎರಡು ವಾಕ್ಯಗಳ ಸಂದರ್ಭ ಸೂಚಿಸಿ, ಸ್ವಾರಸ್ಯ ಬರೆಯಿರಿ. 2x3=6

24. "ದೇವದೇವನೊಲಿದನ ಕುಲವೆ ಸತ್ಕುಲಂ"
25. ನೃಪತುಂಗನೆ ಚಕ್ರವರ್ತಿ ! ಪಂಪನಲ್ಲಿ ಮುಖ್ಯಮಂತ್ರಿ !
26. "ಮುಟ್ಟಿಸಿಕೊಳ್ಳದೆ ಪವಿತ್ರನಾಗಿರಬೇಕೆಂದು ಕೂಂಡಿದ್ದೇನೆ."

ಆ. ಯಾವುದಾದರೂ ಒಂದು ವಾಕ್ಯದ ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ. 1x3=3

27. "ಅಲ್ಲಿ ಆಳದವರೆ ಪಾಪಿಗಳಾಗಿದ್ದರು"
28. ಈ ಬಿಸಿಲೇ ಗೌತಮನನ್ನು ಸನ್ಯಾಸಕ್ಕೆ ದೂಡಿರಬೇಕು.

ಇ. ಯಾವುದಾದರೂ ಒಂದು ವಾಕ್ಯದ ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯ ಬರೆಯಿರಿ. 1x3=3

29. ಕೊಳೆತ ಬಲೆಹಾಕಿ ಎಳೆದರೂ ಬರುವಂಥವರು.
30. ತಲೆಯಿಂದ ಕೆಲಸ ಮಾಡುವುದು ಹೇಗೆಂದು ನಿಮಗೆ ಹೇಳಿಕೊಡುತ್ತೇನೆ.

## ಈ – ವಿಭಾಗ

IV ಅ. ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದು–ಆರು ವಾಕ್ಯಗಳಲ್ಲಿ ಉತ್ತರಿಸಿ. 3x4=12

31. ದುರ್ಯೋಧನ ರಣರಂಗದಲ್ಲಿ ನಡೆದು ಬಂದ ಬಗೆಯನ್ನು ಕವಿ ಹೇಗೆ ವರ್ಣಿಸಿದ್ದಾನೆ?
32. ದೇಹವೆಂಬ ಬಂಡಿಯನ್ನು ಹೇಗೆ ನಡೆಸಬೇಕೆಂದು ತಿಳಿಸಲಾಗಿದೆ?
33. ಒಡಲುಗಳ್ಳರು ನಾಡನ್ನು ಹೇಗೆ ಸುಲಿಗೆ ಮಾಡುತ್ತಿದ್ದಾರೆ?
34. 'ನಾ ಬರಿ ಭ್ರೂಣವಲ್ಲ' ಎಂದು ಹೊಟ್ಟೆಯೊಳಗಿನ ಮಗುವು ಹೇಳಲು ಕಾರಣವೇನು?

ಆ. ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದು-ಆರು ವಾಕ್ಯಗಳಲ್ಲಿ ಉತ್ತರಿಸಿರಿ. 2x4=8

35. ಕರಿಸಿದ್ದೇಗೌಡ ತನ್ನ ಮೊಮ್ಮಗನಿಗೆ ಗಾಂಧಿಯ ಹೆಸರಿಡಲು ಕಾರಣವೇನು?

36. ರಂಗರಾವ್ ಅಸ್ಪೃಶ್ಯರ ಶಿಕ್ಷಣಕ್ಕಾಗಿ ನೀಡಿದ ಕೊಡುಗೆಯೇನು? ವಿವರಿಸಿ.

37. ಹುಲಿಯಿಂದ ಪಾರಾಗಲು ನಾಪಿತ ಕಲ್ಪಿಸಿದ ಕತೆ ಯಾವುದು?

ಇ. ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದು-ಆರು ವಾಕ್ಯಗಳಲ್ಲಿ ಉತ್ತರಿಸಿ. 2x4=8

38. ಬೋಳೇಶಂಕರ ಮತ್ತು ಅವನ ಅಣ್ಣಂದಿರನ್ನು ಭಾಗವತರು ಹೇಗೆ ಪರಿಚಯಿಸುತ್ತಾರೆ?

39. ಯುದ್ಧ ಮಾಡಲು ಸೈನಿಕರು ಏಕೆ ನಿರಾಕರಿಸುತ್ತಾರೆ?

40. 'ಬೋಳೇಶಂಕರನ ಅಣ್ಣಂದಿರೇ ವಾಸಿ' ಎಂದು ಪಿಶಾಚಿ ಹೇಳಲು ಕಾರಣವೇನು?

## ಉ – ವಿಭಾಗ

V. ಒಂದು ಪದ್ಯದ ಭಾವಾರ್ಥ ಬರೆಯಿರಿ. 1x5=5

41. ಕಡೆಗೆ ಕರುಣಾಳು ರಾಘವನಲ್ಲಿ ತಪ್ಪಿಲ್ಲ
ಕಡುಪಾತಕಂಗೈದು ಪೆಣ್ಣಾಗಿ ಜನಿಸಿ ತ
ನ್ನೊಡಲಂ ಪೊರೆವುದೆನ್ನೊಳಪರಾಧಮುಂಟು ಸಾಕಿಲ್ಲಿರಲ್ಬೇಡ ನೀನು
ನಡೆ ಪೋಗು ನಿಲ್ಲದಿನ್ನೆನಗೆ ಮಾರ್ಗದೊಳಾಗ
ಲಡಿಗಡಿಗೆ ಸುಖಮೆಂದು ಸೀತೆ ಕಂಬನಿಗಳಂ
ಮಿಡಿದಾರ್ತೆಯಾಗಿರಲ್ಸೌಮಿತ್ರಿ ನುಡಿದನಾ ವಿಪಿನದಭಿಮಾನಿಗಳ್ಗೆ

42. ರೊಟ್ಟಿ ಪಾಲುಮಾಡಿದಂತೆ ಬಟ್ಟೆ ಗಡಿಕೊರೆದು
ಕತ್ತರಿಸುವ ಅಮ್ಮಿ ತುಂಡು ತುಂಡು ಸೇರಿಸಿ
ಹೊಲಿದು ಒಂದು ಮಾಡುತ್ತಾಳೆ
ಒಂದು ಕೈಯಲ್ಲಿ ಕತ್ತರಿ:
ಮುಖವಾಡ ಒಡೆದು ಬಯಲಾಗಲು
ಮತ್ತೊಂದು ಕೈಯಲ್ಲಿ ಸೂಜಿ;
ಲೋಕದ ಮಾನ ಕಾಪಾಡಲು.

### ಭಾಷಾಭ್ಯಾಸ

VI. ಅ. ಕೆಳಗಿನ ಪ್ರಶ್ನೆಗಳಲ್ಲಿ ಯಾವುದಾದರೂ ಆರಕ್ಕೆ ಸೂಚನೆಗೆ ಅನುಗುಣವಾಗಿ ಉತ್ತರಿಸಿ. 6x2=12

43. ಬಿಡಿಸಿ ಬರೆಯಿರಿ.
ಜಲಾಂಜಲಿ, ಕಣ್ಣರಳಿಸು

44. ಸಮಾನಾರ್ಥಕ ಪದಗಳನ್ನು ಬರೆಯಿರಿ.
ಇಳೆ, ಕಮರು

45. ಸ್ವಂತ ವಾಕ್ಯಗಳಲ್ಲಿ ಬಳಸಿರಿ.
ಮೊರೆಯಿಡು, ಪಿಸುಮಾತು

46. ತದ್ಭವ ರೂಪ ಬರೆಯಿರಿ.
ಅಕ್ಷರ, ಯಾತ್ರೆ

47. ವಿರುದ್ಧ ಪದ ಬರೆಯಿರಿ.
ಅಪರಿಚಿತ, ಸ್ವದೇಶ

48. ಎರಡು ದ್ವಿರುಕ್ತಿ ಬರೆಯಿರಿ.

49. ಗ್ರಾಂಥಿಕ ರೂಪ ಬರೆಯಿರಿ.
ಮೊಕ, ದೇವ್ರೇನ್ರ

ಆ. ಇವುಗಳಲ್ಲಿ ಯಾವುದಾದರೂ ಒಂದನ್ನು ಕುರಿತು ಪ್ರಬಂಧ ಬರೆಯಿರಿ. 1x5=5

50. ವಿವಿಧತೆಯಲ್ಲಿ ಏಕತೆಯ ಭಾರತ

51. ಮಾಧ್ಯಮಗಳ ಜವಾಬ್ದಾರಿ

ಇ. ಇವುಗಳಲ್ಲಿ ಯಾವುದಾದರೂ ಒಂದನ್ನು ಕುರಿತು ಪತ್ರ ಬರೆಯಿರಿ 1x4=4

52. ಕಾಲೇಜಿನ 'ವಾರ್ಷಿಕೋತ್ಸವ ಆಚರಣೆಯ' ಬಗ್ಗೆ ಗೆಳೆಯ/ಗೆಳತಿಗೆ ಪತ್ರ ಬರೆಯಿರಿ.

ಅಥವಾ

53. ನಿಮ್ಮ ಊರಿನ ಬೀದಿದೀಪಗಳನ್ನು ಸರಿಪಡಿಸುವಂತೆ ಸಂಬಂಧಪಟ್ಟ ಅಧಿಕಾರಿಗೆ ಪತ್ರ ಬರೆಯಿರಿ.

ಈ. ಈ ಕೆಳಗಿನ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿ ಬರೆಯಿರಿ. 1x4=4

54. ಮಾಡಿದ್ದುಣ್ಣೋ ಮಾಹಾರಾಯ

55. ತಾಳಿದವನು ಬಾಳಿಯಾನು.